

**ಬೆಂಗಳೂರು:** ಕನ್ನಡ ಚಿತ್ರರಂಗದ ಅಭಿವೃದ್ಧಿ, ಚಿತ್ರೋದ್ಯಮ ಎದುರಿಸುತ್ತಿರುವ ವಿವಿಧ ಸವಾಲುಗಳು, ಸರ್ಕಾರದ ಪ್ರೋತ್ಸಾಹ ನೀತಿಗಳು ಹಾಗೂ ಉದ್ಯಮದ ಭವಿಷ್ಯದ ಕುರಿತು ಚರ್ಚಿಸಲು ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ನಿಯೋಗವು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಬೆಂಗಳೂರಿನ ಅವರ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಭೇಟಿ ಮಾಡಿ ಮಹತ್ವದ ಮಾತುಕತೆ ನಡೆಸಿತು. ಕನ್ನಡ ಚಿತ್ರೋದ್ಯಮದ ಬೆಳವಣಿಗೆಗೆ ಅಗತ್ಯವಿರುವ ಮೂಲಸೌಕರ್ಯ, ನೀತಿ ಬೆಂಬಲ ಹಾಗೂ ಆರ್ಥಿಕ ಸಹಕಾರದ ಕುರಿತು ಸಭೆಯಲ್ಲಿ ಸುದೀರ್ಘ ಚರ್ಚೆ ನಡೆದಿದ್ದು, ಸರ್ಕಾರ ಮತ್ತು ಚಿತ್ರೋದ್ಯಮದ ನಡುವಿನ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಈ ಸಭೆಯನ್ನು ಮಹತ್ವದ ಹೆಜ್ಜೆಯಾಗಿ ಪರಿಗಣಿಸಲಾಗಿದೆ.

ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷೆ ಜಯಮಾಲಾ ಅವರ ನೇತೃತ್ವದಲ್ಲಿ ನಡೆದ ಈ ಸಭೆಯಲ್ಲಿ ಕನ್ನಡ ಚಿತ್ರರಂಗದ ಹಲವು ಹಿರಿಯ ನಿರ್ಮಾಪಕರು, ನಿರ್ದೇಶಕರು, ವಿತರಕರು, ಪ್ರದರ್ಶಕರು, ಕಲಾವಿದರು ಹಾಗೂ ತಂತ್ರಜ್ಞರ ಪ್ರತಿನಿಧಿಗಳು ಭಾಗವಹಿಸಿದ್ದರು. ಕನ್ನಡ ಚಿತ್ರರಂಗದ ಪ್ರಸ್ತುತ ಪರಿಸ್ಥಿತಿ, ಭವಿಷ್ಯದ ಅವಕಾಶಗಳು ಹಾಗೂ ಉದ್ಯಮ ಎದುರಿಸುತ್ತಿರುವ ಸವಾಲುಗಳ ಕುರಿತು ಮುಖ್ಯಮಂತ್ರಿಗಳೊಂದಿಗೆ ವಿಸ್ತೃತವಾಗಿ ಚರ್ಚಿಸಲಾಯಿತು.

ಸಭೆಯಲ್ಲಿ ಮಾತನಾಡಿದ ನಿಯೋಗದ ಸದಸ್ಯರು, ಕನ್ನಡ ಚಿತ್ರರಂಗವು ಕೇವಲ ಮನರಂಜನಾ ಕ್ಷೇತ್ರವಲ್ಲ, ಅದು ಕರ್ನಾಟಕದ ಸಂಸ್ಕೃತಿ, ಭಾಷೆ, ಕಲೆ ಮತ್ತು ಪರಂಪರೆಯ ಪ್ರತಿಬಿಂಬವಾಗಿದೆ ಎಂದು ಅಭಿಪ್ರಾಯಪಟ್ಟರು. ಕಳೆದ ಹಲವು ದಶಕಗಳಿಂದ ಕನ್ನಡ ಚಿತ್ರರಂಗವು ರಾಜ್ಯದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಸಾಹಿತ್ಯಿಕ ಮೌಲ್ಯಗಳನ್ನು ಜನರಿಗೆ ತಲುಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ಜೊತೆಗೆ, ಸಾವಿರಾರು ಕಲಾವಿದರು, ತಂತ್ರಜ್ಞರು, ನಿರ್ಮಾಪಕರು, ನಿರ್ದೇಶಕರು, ವಿತರಕರು, ಚಿತ್ರಮಂದಿರ ಮಾಲೀಕರು ಹಾಗೂ ಕಾರ್ಮಿಕರ ಜೀವನೋಪಾಯಕ್ಕೆ ಈ ಉದ್ಯಮ ಆಧಾರವಾಗಿದೆ ಎಂದು ಅವರು ತಿಳಿಸಿದರು.

ಇತ್ತೀಚಿನ ವರ್ಷಗಳಲ್ಲಿ ಕನ್ನಡ ಚಿತ್ರೋದ್ಯಮವು ಹಲವಾರು ಯಶಸ್ವಿ ಸಿನಿಮಾಗಳ ಮೂಲಕ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದೆ. ಆದಾಗ್ಯೂ, ಚಿತ್ರ ನಿರ್ಮಾಣ ವೆಚ್ಚದಲ್ಲಿ ಉಂಟಾಗಿರುವ ಏರಿಕೆ, ಚಿತ್ರಮಂದಿರಗಳ ನಿರ್ವಹಣಾ ವೆಚ್ಚ, ಡಿಜಿಟಲ್ ಮತ್ತು ಒಟಿಟಿ ವೇದಿಕೆಗಳ ಸ್ಪರ್ಧೆ, ಪ್ರೇಕ್ಷಕರ ಅಭಿರುಚಿಯಲ್ಲಿ ಆಗುತ್ತಿರುವ ಬದಲಾವಣೆಗಳು ಹಾಗೂ ಆರ್ಥಿಕ ಸವಾಲುಗಳು ಚಿತ್ರೋದ್ಯಮದ ಮೇಲೆ ಗಂಭೀರ ಪರಿಣಾಮ ಬೀರುತ್ತಿವೆ ಎಂದು ನಿಯೋಗವು ಮುಖ್ಯಮಂತ್ರಿಗಳ ಗಮನಕ್ಕೆ ತಂದಿತು.

ಕನ್ನಡ ಸಿನಿಮಾಗಳ ನಿರ್ಮಾಣ, ವಿತರಣೆ ಮತ್ತು ಪ್ರದರ್ಶನಕ್ಕೆ ಸರ್ಕಾರದಿಂದ ಹೆಚ್ಚಿನ ಪ್ರೋತ್ಸಾಹ ದೊರೆಯಬೇಕು ಎಂದು ಮನವಿ ಮಾಡಲಾಯಿತು. ವಿಶೇಷವಾಗಿ ಸಣ್ಣ ಮತ್ತು ಮಧ್ಯಮ ಬಜೆಟ್ ಸಿನಿಮಾಗಳಿಗೆ ಉತ್ತೇಜನ ನೀಡುವ ಯೋಜನೆಗಳು, ಹೊಸ ಪ್ರತಿಭೆಗಳಿಗೆ ಅವಕಾಶ ಕಲ್ಪಿಸುವ ಕಾರ್ಯಕ್ರಮಗಳು ಹಾಗೂ ಸ್ಥಳೀಯ ಚಿತ್ರೋದ್ಯಮಕ್ಕೆ ಪೂರಕವಾಗುವ ಆರ್ಥಿಕ ನೀತಿಗಳನ್ನು ಜಾರಿಗೆ ತರಬೇಕೆಂದು ನಿಯೋಗವು ಆಗ್ರಹಿಸಿತು.

ಸಭೆಯಲ್ಲಿ ರಾಜ್ಯದ ಚಿತ್ರಮಂದಿರಗಳ ಪ್ರಸ್ತುತ ಸ್ಥಿತಿಯ ಕುರಿತು ಕೂಡ ಗಂಭೀರ ಚರ್ಚೆ ನಡೆಯಿತು. ಗ್ರಾಮೀಣ ಪ್ರದೇಶಗಳಲ್ಲಿ ಅನೇಕ ಚಿತ್ರಮಂದಿರಗಳು ಆರ್ಥಿಕ ಸಂಕಷ್ಟದಿಂದ ಮುಚ್ಚುವ ಹಂತಕ್ಕೆ ತಲುಪಿವೆ. ನಗರ ಪ್ರದೇಶಗಳಲ್ಲಿಯೂ ನಿರ್ವಹಣಾ ವೆಚ್ಚ ಹೆಚ್ಚಳ, ಪ್ರೇಕ್ಷಕರ ಸಂಖ್ಯೆಯಲ್ಲಿನ ಕುಸಿತ ಹಾಗೂ ಹೊಸ ಮಾಧ್ಯಮಗಳ ಪ್ರಭಾವದಿಂದ ಪ್ರದರ್ಶಕರು ಮತ್ತು ಚಿತ್ರಮಂದಿರ ಮಾಲೀಕರು ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ವಿವರಿಸಲಾಯಿತು. ಈ ಹಿನ್ನೆಲೆಯಲ್ಲಿ ಚಿತ್ರಮಂದಿರಗಳ ಪುನಶ್ಚೇತನಕ್ಕೆ ಸರ್ಕಾರ ವಿಶೇಷ ಪ್ಯಾಕೇಜ್ ಹಾಗೂ ಪ್ರೋತ್ಸಾಹ ಯೋಜನೆಗಳನ್ನು ಘೋಷಿಸಬೇಕು ಎಂದು ಮನವಿ ಮಾಡಲಾಯಿತು.

ಇದರ ಜೊತೆಗೆ, ರಾಜ್ಯದಲ್ಲಿ ಚಿತ್ರೀಕರಣಕ್ಕೆ ಅನುಮತಿ ಪಡೆಯುವ ಪ್ರಕ್ರಿಯೆಯನ್ನು ಇನ್ನಷ್ಟು ಸರಳಗೊಳಿಸುವ ಅಗತ್ಯವಿದೆ ಎಂದು ಸಭೆಯಲ್ಲಿ ಪ್ರಸ್ತಾಪಿಸಲಾಯಿತು. ಚಿತ್ರೀಕರಣಕ್ಕಾಗಿ ವಿವಿಧ ಇಲಾಖೆಗಳ ಅನುಮತಿಗಳನ್ನು ಪಡೆಯಲು ಆಗುತ್ತಿರುವ ವಿಳಂಬವು ಚಿತ್ರ ನಿರ್ಮಾಣದ ವೇಳಾಪಟ್ಟಿಯ ಮೇಲೆ ಪರಿಣಾಮ ಬೀರುತ್ತಿದೆ. ಹೀಗಾಗಿ 'ಸಿಂಗಲ್ ವಿಂಡೋ ಸಿಸ್ಟಮ್' ಮೂಲಕ ಎಲ್ಲಾ ಅನುಮತಿಗಳನ್ನು ತ್ವರಿತವಾಗಿ ನೀಡುವ ವ್ಯವಸ್ಥೆಯನ್ನು ಜಾರಿಗೆ ತರಬೇಕು ಎಂದು ಚಿತ್ರರಂಗದ ಪ್ರತಿನಿಧಿಗಳು ಮನವಿ ಮಾಡಿದರು.

ಕನ್ನಡ ಚಿತ್ರೋದ್ಯಮಕ್ಕೆ ಸಂಬಂಧಿಸಿದ ತಾಂತ್ರಿಕ ಮೂಲಸೌಕರ್ಯಗಳ ಅಭಿವೃದ್ಧಿ ಕುರಿತೂ ಚರ್ಚೆ ನಡೆಯಿತು. ಆಧುನಿಕ ಸ್ಟುಡಿಯೋಗಳು, ಪೋಸ್ಟ್-ಪ್ರೊಡಕ್ಷನ್ ಕೇಂದ್ರಗಳು, ತರಬೇತಿ ಸಂಸ್ಥೆಗಳು ಹಾಗೂ ತಾಂತ್ರಿಕ ಸೌಲಭ್ಯಗಳನ್ನು ರಾಜ್ಯದಲ್ಲಿ ಅಭಿವೃದ್ಧಿಪಡಿಸುವ ಅಗತ್ಯವನ್ನು ನಿಯೋಗವು ಒತ್ತಿ ಹೇಳಿತು. ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಲು ಸರ್ಕಾರದಿಂದ ವಿಶೇಷ ಪ್ರೋತ್ಸಾಹ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದು ಸಹ ಮನವಿ ಮಾಡಲಾಯಿತು.

ಸಭೆಯಲ್ಲಿ ಕನ್ನಡ ಸಿನಿಮಾಗಳಿಗೆ ತೆರಿಗೆ ವಿನಾಯಿತಿ, ಪ್ರೋತ್ಸಾಹ ಧನ, ಚಿತ್ರೋತ್ಸವಗಳಿಗೆ ಬೆಂಬಲ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಕನ್ನಡ ಸಿನಿಮಾಗಳ ಪ್ರಚಾರಕ್ಕೆ ಸಂಬಂಧಿಸಿದ ವಿಷಯಗಳ ಕುರಿತೂ ಚರ್ಚೆ ನಡೆಯಿತು. ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಜಾಗತಿಕ ಮಟ್ಟದಲ್ಲಿ ಪರಿಚಯಿಸಲು ಸರ್ಕಾರವು ಚಿತ್ರೋದ್ಯಮದೊಂದಿಗೆ ಕೈಜೋಡಿಸಬೇಕು ಎಂದು ನಿಯೋಗ ಅಭಿಪ್ರಾಯಪಟ್ಟಿತು.

ಕನ್ನಡ ಚಿತ್ರರಂಗವು ರಾಜ್ಯದ ಆರ್ಥಿಕ ಬೆಳವಣಿಗೆಯಲ್ಲಿಯೂ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ನಿಯೋಗವು ವಿವರಿಸಿತು. ಸಿನಿಮಾ ನಿರ್ಮಾಣ, ವಿತರಣೆ, ಪ್ರದರ್ಶನ, ಪ್ರವಾಸೋದ್ಯಮ, ತಾಂತ್ರಿಕ ಸೇವೆಗಳು ಹಾಗೂ ಸಂಬಂಧಿತ ಉದ್ಯಮಗಳ ಮೂಲಕ ಸಾವಿರಾರು ಜನರಿಗೆ ಉದ್ಯೋಗಾವಕಾಶಗಳು ಸೃಷ್ಟಿಯಾಗುತ್ತಿವೆ. ಹೀಗಾಗಿ ಚಿತ್ರೋದ್ಯಮವನ್ನು ಒಂದು ಪ್ರಮುಖ ಆರ್ಥಿಕ ಕ್ಷೇತ್ರವಾಗಿ ಪರಿಗಣಿಸಿ ಸರ್ಕಾರ ವಿಶೇಷ ನೀತಿಗಳನ್ನು ರೂಪಿಸಬೇಕೆಂದು ಮನವಿ ಮಾಡಲಾಯಿತು.

ಸಭೆಯಲ್ಲಿ ಖ್ಯಾತ ನಿರ್ಮಾಪಕ ವಿಜಯ್ ಕಿರಾಗಂದೂರು ಅವರು ಕನ್ನಡ ಚಿತ್ರರಂಗದ ಭವಿಷ್ಯದ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರೆ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಮಾಜಿ ಅಧ್ಯಕ್ಷರಾದ ಗಂಗರಾಜು, ಸಾ.ರಾ. ಗೋವಿಂದು ಮತ್ತು ಚಿನ್ನೇಗೌಡ ಅವರು ಉದ್ಯಮದ ವಿವಿಧ ಸಮಸ್ಯೆಗಳ ಕುರಿತು ಮುಖ್ಯಮಂತ್ರಿಗಳ ಗಮನ ಸೆಳೆದರು. ಗೌರವ ಕಾರ್ಯದರ್ಶಿ ರಮೇಶ್ ಬಾಬು ಹಾಗೂ ಹಿರಿಯ ನಟ ಸುಂದರರಾಜ್ ಸೇರಿದಂತೆ ಹಲವು ಗಣ್ಯರು ಸಹ ತಮ್ಮ ಸಲಹೆ ಮತ್ತು ಅಭಿಪ್ರಾಯಗಳನ್ನು ಮಂಡಿಸಿದರು.

ನಿಯೋಗದ ಮನವಿಗಳನ್ನು ಆಲಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ಕನ್ನಡ ಚಿತ್ರರಂಗವು ರಾಜ್ಯದ ಸಾಂಸ್ಕೃತಿಕ ಪರಂಪರೆಯ ಪ್ರಮುಖ ಪ್ರತೀಕವಾಗಿದ್ದು, ಅದರ ಬೆಳವಣಿಗೆಗೆ ಸರ್ಕಾರ ಸದಾ ಸಕಾರಾತ್ಮಕವಾಗಿ ಸ್ಪಂದಿಸುತ್ತದೆ ಎಂದು ಭರವಸೆ ನೀಡಿದರೆಂದು ತಿಳಿದುಬಂದಿದೆ. ಚಿತ್ರೋದ್ಯಮದ ಸಮಸ್ಯೆಗಳು ಮತ್ತು ಬೇಡಿಕೆಗಳನ್ನು ಸರ್ಕಾರದ ಮಟ್ಟದಲ್ಲಿ ಸಮಗ್ರವಾಗಿ ಪರಿಶೀಲಿಸಿ, ಸಾಧ್ಯವಿರುವ ಎಲ್ಲ ರೀತಿಯ ಸಹಕಾರ ನೀಡಲು ಸರ್ಕಾರ ಬದ್ಧವಾಗಿದೆ ಎಂಬ ಸಂದೇಶವನ್ನು ಅವರು ನೀಡಿದ್ದಾರೆ.

ಕನ್ನಡ ಚಿತ್ರರಂಗವು ರಾಜ್ಯದ ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ಭಾಷೆಯ ಪ್ರತಿನಿಧಿಯಾಗಿರುವುದರಿಂದ ಅದರ ಅಭಿವೃದ್ಧಿಗೆ ಸರ್ಕಾರ ಮತ್ತು ಚಿತ್ರೋದ್ಯಮದ ನಡುವಿನ ಸಮನ್ವಯ ಅತ್ಯಗತ್ಯವಾಗಿದೆ ಎಂಬ ಅಭಿಪ್ರಾಯವೂ ಸಭೆಯಲ್ಲಿ ವ್ಯಕ್ತವಾಯಿತು. ಈ ಸಭೆಯು ಕನ್ನಡ ಚಿತ್ರೋದ್ಯಮದ ಭವಿಷ್ಯದ ಅಭಿವೃದ್ಧಿ, ಹೂಡಿಕೆ, ಉದ್ಯೋಗ ಸೃಷ್ಟಿ ಮತ್ತು ಜಾಗತಿಕ ಮಟ್ಟದಲ್ಲಿ ಕನ್ನಡ ಸಿನಿಮಾಗಳಿಗೆ ಹೆಚ್ಚಿನ ಗುರುತನ್ನು ತಂದುಕೊಡುವ ನಿಟ್ಟಿನಲ್ಲಿ ಮಹತ್ವದ ಬೆಳವಣಿಗೆಯಾಗಿ ಪರಿಗಣಿಸಲಾಗುತ್ತಿದೆ.

ಚಿತ್ರೋದ್ಯಮ ಮತ್ತು ಸರ್ಕಾರದ ನಡುವಿನ ಸಂಬಂಧವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ನಡೆದ ಈ ಸಭೆಯು ಕನ್ನಡ ಚಿತ್ರರಂಗಕ್ಕೆ ಹೊಸ ನಿರೀಕ್ಷೆ ಮೂಡಿಸಿದ್ದು, ಮುಂದಿನ ದಿನಗಳಲ್ಲಿ ಸರ್ಕಾರದಿಂದ ಚಿತ್ರೋದ್ಯಮಕ್ಕೆ ಸಂಬಂಧಿಸಿದ ಹಲವು ಮಹತ್ವದ ನಿರ್ಧಾರಗಳು ಪ್ರಕಟವಾಗುವ ಸಾಧ್ಯತೆ ಇದೆ ಎಂಬ ಆಶಾವಾದವನ್ನು ಚಿತ್ರರಂಗದ ಪ್ರಮುಖರು ವ್ಯಕ್ತಪಡಿಸಿದ್ದಾರೆ.

## ಹೆಂಡತಿ ದಪ್ಪಗಿದ್ದಾಳೆಂದು ಕತ್ತು ಹಿಸುಕಿ ಕೊಲೆಗೈದ ಪತಿ



**ಧಾರವಾಡ:** ಪತ್ನಿ ದಪ್ಪಗಿದ್ದಾಳೆ ಹಾಗೂ ಗರ್ಭಧಾರಣೆ ಆಗುತ್ತಿಲ್ಲ ಎಂಬ ಕಾರಣ ನೀಡಿ ಪತಿ ಕತ್ತು ಹಿಸುಕಿ ಕೊಲೆ ಮಾಡಿರುವ ಅಮಾನವೀಯ ಘಟನೆ ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ಹಣಸಿ ಗ್ರಾಮದಲ್ಲಿ ಬೆಳಕಿಗೆ ಬಂದಿದೆ. ಈ ಘಟನೆ ಸಂಬಂಧ ಪೊಲೀಸರು ಪತಿ ಸೇರಿದಂತೆ ನಾಲ್ವರನ್ನು ಬಂಧಿಸಿ ತನಿಖೆ ಆರಂಭಿಸಿದ್ದಾರೆ.

ಮೃತ ಮಹಿಳೆಯನ್ನು ಪ್ರಿಯಾಂಕ್ ಕಮಲಾಕರ್ (29) ಎಂದು ಗುರುತಿಸಲಾಗಿದ್ದು, ಆರೋಪಿ ಪತಿಯನ್ನು ಬಸವರಾಜ್ ವಡ್ಡರ್ ಎಂದು ಗುರುತಿಸಲಾಗಿದೆ. ಪ್ರಾಥಮಿಕ ತನಿಖೆಯ ಪ್ರಕಾರ, 2024ರಲ್ಲಿ ಪ್ರಿಯಾಂಕ್ ಮತ್ತು ಬಸವರಾಜ್ ವಿವಾಹವಾಗಿದ್ದು, ಮದುವೆಯಾದ ಕೆಲವೇ ತಿಂಗಳಿನಿಂದ ಪತ್ನಿಯ ಮೇಲೆ ವಿವಿಧ ರೀತಿಯ ಕಿರುಕುಳ ನೀಡಲಾಗುತ್ತಿತ್ತು ಎಂದು ಆರೋಪಿಸಲಾಗಿದೆ.

ತವರು ಮನೆಯಿಂದ ಹೆಚ್ಚಿನ ಬಂಗಾರ ಮತ್ತು ಹಣ ತರುವಂತೆ ಒತ್ತಾಯಿಸುತ್ತಿದ್ದ ಆರೋಪಿ, ಪತ್ನಿಯ ದೇಹದಾಕೃತಿಯ ಕುರಿತು ಅವಹೇಳನಕಾರಿ ಮಾತುಗಳನ್ನಾಡುತ್ತಿದ್ದ ಎನ್ನಲಾಗಿದೆ. ಅಲ್ಲದೆ, "ನೀನು ದಪ್ಪಗಿದ್ದೀಯ, ಗರ್ಭಿಣಿಯಾಗುವುದಿಲ್ಲ" ಎಂದು ನಿತ್ಯ ಕಿರುಕುಳ ನೀಡುತ್ತಿದ್ದ ಎಂದು ಮೃತೆಯ ಕುಟುಂಬಸ್ಥರು ಆರೋಪಿಸಿದ್ದಾರೆ.

ಕಳೆದ ಜೂನ್ 29ರಂದು ಈ ಘಟನೆ ನಡೆದಿದ್ದು, ಆರೋಪಿಯು ಪತ್ನಿಯನ್ನು ಕತ್ತು ಹಿಸುಕಿ ಹತ್ಯೆ ಮಾಡಿದ್ದಾನೆ ಎಂದು ಪೊಲೀಸರು ಶಂಕಿಸಿದ್ದಾರೆ. ಆದರೆ ಘಟನೆ ನಡೆದ ವಿಚಾರವನ್ನು ತಕ್ಷಣವೇ ಮೃತೆಯ ಕುಟುಂಬಸ್ಥರಿಗೆ ತಿಳಿಸದೇ ಮುಚ್ಚಿಡಲು ಪ್ರಯತ್ನಿಸಲಾಗಿದೆ ಎಂಬ ಆರೋಪವೂ ಕೇಳಿಬಂದಿದೆ.

ಮಂಗಳವಾರ ಬೆಳಗ್ಗೆ ಪ್ರಕರಣ ಬೆಳಕಿಗೆ ಬಂದ ನಂತರ, ಮೃತೆಯ ಪೋಷಕರಿಗೆ ಮಾಹಿತಿ ನೀಡಲಾಗಿದೆ. ಮಾಹಿತಿ ತಿಳಿದು ಕಲಬುರಗಿಯಿಂದ ನವಲಗುಂದಕ್ಕೆ ಆಗಮಿಸಿದ ಮೃತೆಯ ಕುಟುಂಬಸ್ಥರು, ತಡರಾತ್ರಿ ನವಲಗುಂದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಪ್ರಕರಣ ದಾಖಲಿಸಿಕೊಂಡ ಪೊಲೀಸರು ತಕ್ಷಣ ತನಿಖೆ ಆರಂಭಿಸಿ, ಪ್ರಮುಖ ಆರೋಪಿ ಬಸವರಾಜ್ ವಡ್ಡರ್ ಸೇರಿದಂತೆ ರೇಣವ್ವ, ಸುಭಾಷ್ ಹಾಗೂ ಸಿದ್ದರಾಮೇಶ್ ಅವರನ್ನು ಬಂಧಿಸಿದ್ದಾರೆ. ಪ್ರಕರಣದ ಕುರಿತು ಹೆಚ್ಚಿನ ತನಿಖೆ ಮುಂದುವರಿದಿದ್ದು, ಘಟನೆಯ ಹಿಂದಿನ ನಿಖರ ಕಾರಣಗಳು ಮತ್ತು ಇತರರ ಪಾತ್ರದ ಬಗ್ಗೆ ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ.

ಈ ಘಟನೆ ವೈವಾಹಿಕ ಕಿರುಕುಳ, ವರದಕ್ಷಿಣೆ ಬೇಡಿಕೆ ಹಾಗೂ ಮಹಿಳೆಯರ ಮೇಲಿನ ದೌರ್ಜನ್ಯ ಕುರಿತಂತೆ ಮತ್ತೊಮ್ಮೆ ಗಂಭೀರ ಚರ್ಚೆಗೆ ಕಾರಣವಾಗಿದ್ದು, ಸ್ಥಳೀಯರಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.

## ಕೃಷಿ ಅಧಿಕಾರಿ ವೆಂಕಟರಂಗಶೆಟ್ಟಿ ರವರಿಗೆ ಹೃದಯ ಸ್ಪರ್ಶಿ ಬೀಳ್ಕೊಡುಗೆ ಸಮಾರಂಭ



**ಯಳಂದೂರು:** ತಾಲೂಕಿನ ಸಹಾಯಕ ಕೃಷಿ ಇಲಾಖೆಯ ತಾಂತ್ರಿಕ ಅಧಿಕಾರಿ ಎ. ವೆಂಕಟರಂಗಶೆಟ್ಟರವರಿಗೆ ಮಂಗಳವಾರ ಸಂಜೆ ಹೃದಯಸ್ಪರ್ಶಿ ಬೀಳ್ಕೊಡುಗೆ ನೀಡಲಾಯಿತು.

ಈ ಸಂದರ್ಭದಲ್ಲಿ ಕೃಷಿಕ ಸಮಾಜ ಅಧ್ಯಕ್ಷ ಗೌಡಹಳ್ಳಿ ರವಿ ಮಾತನಾಡಿ, ಎ. ವೆಂಕಟರಂಗಶೆಟ್ಟಿ ಇಲಾಖೆಯಲ್ಲಿ ಕಳೆದ 37 ವರ್ಷಗಳಿಂದ ಉತ್ತಮ ಜನ ಸ್ನೇಹಿಯಾಗಿ ಸರ್ಕಾರದ ವಿವಿಧ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಮೂಲಕ ಪ್ರಮಾಣಿಕ ಸೇವೆಯನ್ನು ಸಲ್ಲಿಸಿದ್ದಾರೆ. ಟಿ. ನರಸೀಪುರ, ಗುಂಡ್ಲುಪೇಟೆ, ಸೇರಿದಂತೆ ಯಳಂದೂರು ಕೃಷಿಯಲ್ಲಿ ಹಲವು ವರ್ಷಗಳಿಂದ ಪ್ರಮಾಣಿಕ ಸೇವೆ ಸಲ್ಲಿಸಿದ್ದಾರೆ. ರೈತರ ಜಮೀನುಗಳಿಗೆ ಭೇಟಿ ನೀಡುವುದು, ಬೆಳೆ ರೋಗ, ಬೀಜ, ಗೊಬ್ಬರ ಕೃಷಿ ವಿಸ್ತರಣೆ, ಹನಿ ನೀರಾವರಿ, ಪಿ.ಎಂ-ಕಿಸಾನ್, ಬೆಳೆ ವಿಮೆ, ಯಂತ್ರೋಪಕರಣ ಯೋಜನೆ, ಬಿತ್ತನೆ ಬೀಜಗಳ ಸಮರ್ಪಕ ವಿತರಣೆ ಸೇರಿದಂತೆ ಸಾಕಷ್ಟು ಯೋಜನೆಗಳನ್ನು ರೈತರಿಗೆ ತಲುಪಿಸುವ ನಿಟ್ಟಿನಲ್ಲಿ ಉತ್ತಮವಾಗಿ ಸೇವೆ ಸಲ್ಲಿಸಿದ್ದಾರೆ. ಈ ಮೂಲಕ ಕೃಷಿ ಕ್ಷೇತ್ರದ ಬೆಳವಣಿಗೆಗೆ ಸಹಕಾರ ನೀಡಿದ್ದಾರೆ. ಈ ರೀತಿಯ ಅಧಿಕಾರಿಗಳು ದೊರೆಯುವುದು ಕಷ್ಟವಾಗಿದೆ. ಇತರರು ಇವರ ಸಹಕಾರ, ಮಾರ್ಗದರ್ಶ ಪಡೆದುಕೊಂಡು ಕೆಲಸಗಳನ್ನು ನಿರ್ವಹಿಸುವ ನಿಟ್ಟಿನಲ್ಲಿ ಮುಂದಾಗಬೇಕು ಎಂದರು.

ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಅಮೃತೇಶ್ವರ ಮಾತನಾಡಿ, ವೆಂಕಟರಂಗಶೆಟ್ಟಿ ಇಲಾಖೆಯ ಕೆಲಸಗಳನ್ನು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದ್ದರು. ರೈತರ, ಇಲಾಖೆ ಸಿಬ್ಬಂದಿಗಳ ಜತೆಗೆ ಉತ್ತಮ ಸಂಬಂಧ ಇರಿಸಿಕೊಂಡಿದ್ದರು. ಸಮಯಕ್ಕೆ ಸರಿಯಾಗಿ ಕೆಲಸ ಕಾರ್ಯಗಳನ್ನು ನಿರ್ವಹಿಸುವ ಮೂಲಕ ಕೃಷಿ ಇಲಾಖೆ ಸ್ವಂತ ಕಟ್ಟಡ, ಸಭಾಂಗಣ ನಿರ್ಮಾಣ, ಸರ್ಕಾರದ ಸೌಲಭ್ಯಗಳು, ಕೃಷಿ ಕ್ಷೇತ್ರ ವಿಸ್ತರಣೆ ಸೇರಿದಂತೆ ಇತರೆ ಕಾರ್ಯಗಳನ್ನು ಯಶ್ವಸಿಯಾಗಿ ಮಾಡುವ ಮೂಲಕ ಉತ್ತಮ ಕೆಲಸವನ್ನು ನಿರ್ವಹಿಸಿದ್ದಾರೆ ಎಂದು ಹೇಳಿದರು

ಸರ್ಕಾರಿ ನೌಕರರ ಸಂಘ, ಕೃಷಿಕ ಸಮಾಜ, ವಿವಿಧ ಇಲಾಖೆ ನೌಕರರು, ರೈತ ಸಂಘ ಸದಸ್ಯರೂ ಸೇರಿದಂತೆ ಸಾರ್ವಜನಿಕರು ಶಾಲು, ಹಾರ, ಮೈಸೂರು ಪೇಟ ತೊಡಿಸಿ ಫಲತಾಂಬೂಲ ನೀಡಿ ಇವರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಅಮ್ಮನಪುರ ಮಹೇಶ್, ಕೃಷಿಕ ಸಮಾಜದ ಉಪಾಧ್ಯಕ್ಷ ಮಲ್ಲಿಕಾರ್ಜುನ, ಬೂದಿತಿಟ್ಟು ನಾಗೇಂದ್ರ, ಹೊನ್ನೂರು ಪ್ರಸನ್ನ, ಸಿದ್ಧರಾಜು, ಪ್ರಭುಸ್ವಾಮಿ, ಶ್ರೀಕಂಠ, ಯರಿಯೂರು ರಾಜಣ್ಣ, ರಾಜೇಂದ್ರಸ್ವಾಮಿ, ಹೊನ್ನೂರು ಪ್ರಕಾಶ್, ಉಮಾಶಂಕರ್, ಮದ್ದೂರು ವಿರೂಪಾಕ್ಷ, ಪ್ರಭು ಸೇರಿದಂತೆ ಅನೇಕರು ಇದ್ದರು.

# ಮನೆಯ ಮೇಲೆ ಮಣ್ಣು ಕುಸಿದು ಮೂವರ ದುರ್ಮರಣ

## ಮೃತರ ಕುಟುಂಬಕ್ಕೆ ತಲಾ 5 ಲಕ್ಷ ರೂ. ಪರಿಹಾರ ಘೋಷಣೆ..!



**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ರಾತ್ರಿ ಸುರಿದ ಭಾರೀ ಮಳೆಯಿಂದಾಗಿ ಸಂಭವಿಸಿದ ಭೂಕುಸಿತದಲ್ಲಿ ತಾಯಿ ಹಾಗೂ ಇಬ್ಬರು ಪುಟ್ಟ ಮಕ್ಕಳು ಸಾವನ್ನಪ್ಪಿರುವ ಹೃದಯವಿದ್ರಾವಕ ಘಟನೆ ಬುಧವಾರ ಮುಂಜಾನೆ ಮಂಗಳೂರು ನಗರದ ಕಂಕನಾಡಿ ಸಮೀಪದ ನಾಗುರಿಯಲ್ಲಿ ನಡೆದಿದೆ. ನಿರಂತರ ಮಳೆಯಿಂದ ಗುಡ್ಡದ ಮಣ್ಣು ಕುಸಿದು ಬಾಡಿಗೆ ಮನೆಯೊಂದರ ಮೇಲೆ ಬಿದ್ದ ಪರಿಣಾಮ ಈ ದುರಂತ ಸಂಭವಿಸಿದ್ದು, ಸ್ಥಳೀಯರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದೆ.

ಮೃತರನ್ನು ಶಾಂತಾ (46), ಅನಾಮಿಕಾ ಚೌರಾಸಿಯಾ (8) ಮತ್ತು ಪರಿ (4) ಎಂದು ಗುರುತಿಸಲಾಗಿದೆ. ಇವರು ಮೂಲತಃ ಬಿಹಾರ ರಾಜ್ಯದ ನಿವಾಸಿಗಳಾಗಿದ್ದು, ಉದ್ಯೋಗ ನಿಮಿತ್ತ ಮಂಗಳೂರಿಗೆ ಆಗಮಿಸಿ ಕಟ್ಟಡ ನಿರ್ಮಾಣ ಕಾಮಗಾರಿಗಳಲ್ಲಿ ತೊಡಗಿಸಿಕೊಂಡಿದ್ದರು. ಕುಟುಂಬದ ಸದಸ್ಯರೊಂದಿಗೆ ನಾಗುರಿ ಪ್ರದೇಶದ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದ ವೇಳೆ ಈ ದುರ್ಘಟನೆ ಸಂಭವಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮಂಗಳವಾರ ರಾತ್ರಿ ಆರಂಭವಾದ ಧಾರಾಕಾರ ಮಳೆ ದಕ್ಷಿಣ ಕನ್ನಡ ಜಿಲ್ಲೆಯ ಹಲವು ಭಾಗಗಳಲ್ಲಿ ಜನಜೀವನ ಅಸ್ತವ್ಯಸ್ತಗೊಳಿಸಿದೆ. ಜಿಲ್ಲೆಯ ವಿವಿಧ ಪ್ರದೇಶಗಳಲ್ಲಿ ಕೃತಕ ನೆರೆ, ಮರಗಳು ಉರುಳುವುದು ಹಾಗೂ ಭೂಕುಸಿತದಂತಹ ಘಟನೆಗಳು ವರದಿಯಾಗಿದ್ದು, ಮಂಗಳೂರು ನಗರದಲ್ಲಿಯೂ ಮಳೆಯ ತೀವ್ರತೆ ಹೆಚ್ಚಾಗಿತ್ತು. ಇದೇ ಸಂದರ್ಭದಲ್ಲಿ ಕಂಕನಾಡಿ ನಗರ ಪೊಲೀಸ್ ಠಾಣೆ ವ್ಯಾಪ್ತಿಯ ನಾಗುರಿ ಪ್ರದೇಶದಲ್ಲಿರುವ ಗುಡ್ಡದ ಭಾಗದಲ್ಲಿ ಮಣ್ಣು ಸಡಿಲಗೊಂಡು ಏಕಾಏಕಿ ಕುಸಿದಿದೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಬುಧವಾರ ಮುಂಜಾನೆ ಸುಮಾರು 4.45 ಗಂಟೆ ಸುಮಾರಿಗೆ ಗುಡ್ಡದ ದೊಡ್ಡ ಪ್ರಮಾಣದ ಮಣ್ಣು ಮತ್ತು ಕಲ್ಲುಗಳು ಬಾಡಿಗೆ ಮನೆಯ ಹಿಂಭಾಗದ ಮೇಲೆ ಕುಸಿದು ಬಿದ್ದಿವೆ. ಮಣ್ಣು ಕುಸಿದ ಪರಿಣಾಮ ಮನೆಯ ಹಿಂಭಾಗದ ಗೋಡೆ ಸಂಪೂರ್ಣ ಧ್ವಂಸಗೊಂಡಿದ್ದು, ಮನೆಯೊಳಗಿದ್ದ ಕುಟುಂಬಗಳು ಕ್ಷಣಾರ್ಧದಲ್ಲಿ ಮಣ್ಣಿನಡಿ ಸಿಲುಕಿಕೊಂಡಿವೆ.

ಘಟನೆ ಸಂಭವಿಸಿದ ತಕ್ಷಣ ಸ್ಥಳೀಯ ನಿವಾಸಿಗಳು ರಕ್ಷಣಾ ಕಾರ್ಯಾಚರಣೆಗೆ ಮುಂದಾಗಿದ್ದು, ಮಣ್ಣಿನಡಿ ಸಿಲುಕಿದ್ದವರನ್ನು ಹೊರತೆಗೆಯಲು ಪ್ರಯತ್ನ ಆರಂಭಿಸಿದರು. ಬಳಿಕ ಅಗ್ನಿಶಾಮಕ ಮತ್ತು ತುರ್ತು ಸೇವಾ ಸಿಬ್ಬಂದಿ, ರಾಜ್ಯ ವಿಪತ್ತು ನಿರ್ವಹಣಾ ಪಡೆ (ಎಸ್‌ಡಿಆರ್‌ಎಫ್) ಹಾಗೂ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ವ್ಯಾಪಕ ರಕ್ಷಣಾ ಕಾರ್ಯಾಚರಣೆ ಕೈಗೊಂಡರು. ಜೆಸಿಬಿ ಯಂತ್ರಗಳು ಮತ್ತು ಇತರ ಅಗತ್ಯ ಉಪಕರಣಗಳ ಸಹಾಯದಿಂದ ಮಣ್ಣಿನ ತೆರವು ಕಾರ್ಯಾಚರಣೆ ನಡೆಸಲಾಯಿತು.

ರಕ್ಷಣಾ ಸಿಬ್ಬಂದಿ ಮತ್ತು ಸ್ಥಳೀಯರ ಸಹಕಾರದೊಂದಿಗೆ ಮಣ್ಣಿನಡಿ ಸಿಲುಕಿದ್ದವರನ್ನು ಹೊರತೆಗೆದರೂ, ಶಾಂತಾ ಹಾಗೂ ಅವರ ಇಬ್ಬರು ಪುಟ್ಟ ಮಕ್ಕಳು ಸ್ಥಳದಲ್ಲೇ ಮೃತಪಟ್ಟಿರುವುದು ದೃಢಪಟ್ಟಿದೆ. ಈ ಘಟನೆ ಸ್ಥಳೀಯರನ್ನು ತೀವ್ರ ದುಃಖಕ್ಕೆ ದೂಡಿದ್ದು, ಮೃತರ ಕುಟುಂಬ ಸದಸ್ಯರ ಆಕ್ರಂದನ ಮುಗಿಲು ಮುಟ್ಟಿತ್ತು.

ಈ ದುರಂತದಲ್ಲಿ ಸಿಲುಕಿದ್ದ ಇನ್ನೂ ಮೂವರನ್ನು ರಕ್ಷಿಸಲಾಗಿದ್ದು, ಅವರನ್ನು ತಕ್ಷಣವೇ ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ. ಗಾಯಾಳುಗಳ ಆರೋಗ್ಯ ಸ್ಥಿತಿಯ ಮೇಲೆ ವೈದ್ಯರು ನಿಗಾ ವಹಿಸಿದ್ದು, ಅಗತ್ಯ ಚಿಕಿತ್ಸೆ ನೀಡಲಾಗುತ್ತಿದೆ. ಅವರಲ್ಲಿ ಕೆಲವರಿಗೆ ಸಣ್ಣ ಪ್ರಮಾಣದ ಗಾಯಗಳಾಗಿದ್ದು, ವೈದ್ಯಕೀಯ ಪರೀಕ್ಷೆ ಮುಂದುವರಿದಿದೆ ಎಂದು ತಿಳಿದುಬಂದಿದೆ.

ಅಧಿಕಾರಿಗಳ ಪ್ರಕಾರ, ಈ ಬಾಡಿಗೆ ಮನೆಯಲ್ಲಿ ಒಟ್ಟು ನಾಲ್ಕು ಕುಟುಂಬಗಳು ವಾಸಿಸುತ್ತಿದ್ದವು. ನಿರಂತರ ಮಳೆಯಿಂದಾಗಿ ಗುಡ್ಡದ ಮಣ್ಣು ಸಡಿಲಗೊಂಡಿದ್ದು, ಮುಂಜಾನೆ ವೇಳೆಗೆ ಏಕಾಏಕಿ ಕುಸಿದ ಪರಿಣಾಮ ಈ ಭೀಕರ ದುರಂತ ಸಂಭವಿಸಿದೆ. ಮಳೆಯ ತೀವ್ರತೆ ಮತ್ತು ಗುಡ್ಡದ ಅಸ್ಥಿರತೆಯೇ ಭೂಕುಸಿತಕ್ಕೆ ಪ್ರಮುಖ ಕಾರಣವಾಗಿರಬಹುದು ಎಂದು ಪ್ರಾಥಮಿಕ ತನಿಖೆಯಲ್ಲಿ ಅಂದಾಜಿಸಲಾಗಿದೆ.

ಘಟನಾ ಸ್ಥಳದಲ್ಲಿ ಇನ್ನೂ ಮಣ್ಣಿನ ತೆರವು ಕಾರ್ಯಾಚರಣೆ ಮುಂದುವರಿದಿದ್ದು, ಅವಶೇಷಗಳಡಿ ಇನ್ನೂ ಯಾರಾದರೂ ಸಿಲುಕಿರುವ ಸಾಧ್ಯತೆ ಇದೆಯೇ ಎಂಬುದನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಸುತ್ತಮುತ್ತಲಿನ ನಿವಾಸಿಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸುವ ಕಾರ್ಯವೂ ಕೈಗೊಳ್ಳಲಾಗಿದೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಹೆಚ್.ವಿ. ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯ ಅವಲೋಕನ ನಡೆಸಿದರು. ರಕ್ಷಣಾ ಕಾರ್ಯಾಚರಣೆಯ ಪ್ರಗತಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಮೃತರ ಕುಟುಂಬಗಳಿಗೆ ಸರ್ಕಾರದ ವತಿಯಿಂದ ತಲಾ 5 ಲಕ್ಷ ರೂಪಾಯಿ ಪರಿಹಾರ ಧನ ನೀಡಲಾಗುವುದು ಎಂದು ಘೋಷಿಸಿದರು. ಅಲ್ಲದೆ, ಮಳೆ ಮತ್ತು ಭೂಕುಸಿತದಿಂದ ಅಪಾಯ ಎದುರಿಸುತ್ತಿರುವ ಪ್ರದೇಶಗಳಲ್ಲಿ ಕಟ್ಟುನಿಟ್ಟಿನ ನಿಗಾವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮುಂದಿನ ಕೆಲವು ದಿನಗಳ ಕಾಲ ಭಾರೀ ಮಳೆಯ ಮುನ್ಸೂಚನೆ ಇರುವ ಹಿನ್ನೆಲೆಯಲ್ಲಿ, ತಗ್ಗು ಪ್ರದೇಶಗಳು ಹಾಗೂ ಗುಡ್ಡದ ಅಂಚಿನಲ್ಲಿರುವ ನಿವಾಸಿಗಳು ಹೆಚ್ಚಿನ ಎಚ್ಚರಿಕೆ ವಹಿಸುವಂತೆ ಜಿಲ್ಲಾಡಳಿತ ಮನವಿ ಮಾಡಿದೆ. ಅಗತ್ಯವಿದ್ದಲ್ಲಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರವಾಗುವಂತೆ ಸೂಚಿಸಲಾಗಿದ್ದು, ಯಾವುದೇ ತುರ್ತು ಪರಿಸ್ಥಿತಿ ಎದುರಾದಲ್ಲಿ ತಕ್ಷಣ ಸ್ಥಳೀಯ ಆಡಳಿತ ಮತ್ತು ತುರ್ತು ಸೇವೆಗಳ ಸಹಾಯ ಪಡೆಯುವಂತೆ ಸಾರ್ವಜನಿಕರಿಗೆ ಮನವಿ ಮಾಡಲಾಗಿದೆ.

ಮಂಗಳೂರಿನ ನಾಗುರಿಯಲ್ಲಿ ಸಂಭವಿಸಿದ ಈ ಭೂಕುಸಿತ ದುರಂತವು ನಿರಂತರ ಮಳೆಯ ಪರಿಣಾಮ ಉಂಟಾಗುವ ಅಪಾಯಗಳ ಬಗ್ಗೆ ಮತ್ತೊಮ್ಮೆ ಎಚ್ಚರಿಕೆಯ ಗಂಟೆ ಮೊಳಗಿಸಿದ್ದು, ಮಳೆಗಾಲದಲ್ಲಿ ಗುಡ್ಡ ಪ್ರದೇಶಗಳಲ್ಲಿ ವಾಸಿಸುವ ಜನರ ಸುರಕ್ಷತೆಯ ಕುರಿತು ಗಂಭೀರ ಚಿಂತನೆಗೆ ಕಾರಣವಾಗಿದೆ.

ಒಟ್ಟಾರೆಯಾಗಿ, ಮಂಗಳೂರಿನ ನಾಗುರಿಯಲ್ಲಿ ಸಂಭವಿಸಿದ ಈ ಭೂಕುಸಿತ ದುರಂತವು ನಿರಂತರ ಮಳೆ ಮತ್ತು ಪ್ರಕೃತಿ ವಿಕೋಪಗಳ ಅಪಾಯವನ್ನು ಮತ್ತೊಮ್ಮೆ ಸ್ಮರಿಸಿದೆ. ದುರ್ಘಟನೆಯಲ್ಲಿ ಪ್ರಾಣ ಕಳೆದುಕೊಂಡ ತಾಯಿ ಮತ್ತು ಇಬ್ಬರು ಪುಟ್ಟ ಮಕ್ಕಳ ಸಾವಿನಿಂದ ಪ್ರದೇಶದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದ್ದು, ಮಳೆಗಾಲದ ಸಂದರ್ಭದಲ್ಲಿ ಗುಡ್ಡ ಪ್ರದೇಶಗಳಲ್ಲಿ ವಾಸಿಸುವ ಜನರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯತೆಯನ್ನು ಈ ಘಟನೆ ಮತ್ತೊಮ್ಮೆ ಎತ್ತಿ ತೋರಿಸಿದೆ.

ಈ ನಡುವೆ, ಜಿಲ್ಲಾಡಳಿತ ಮತ್ತು ರಕ್ಷಣಾ ಸಿಬ್ಬಂದಿ ಸ್ಥಳದಲ್ಲಿ ನಿರಂತರವಾಗಿ ಕಾರ್ಯಾಚರಣೆ ಮುಂದುವರಿಸಿದ್ದು, ಭೂಕುಸಿತಕ್ಕೆ ಕಾರಣವಾದ ಅಂಶಗಳ ಕುರಿತು ಸಮಗ್ರ ಪರಿಶೀಲನೆ ನಡೆಸಲಾಗುತ್ತಿದೆ. ಭಾರೀ ಮಳೆಯ ಹಿನ್ನೆಲೆಯಲ್ಲಿ ಜಿಲ್ಲೆಯ ಸೂಕ್ಷ್ಮ ಪ್ರದೇಶಗಳಲ್ಲಿ ಮುನ್ನೆಚ್ಚರಿಕೆ ಕ್ರಮಗಳನ್ನು ಮತ್ತಷ್ಟು ಬಿಗಿಗೊಳಿಸಲಾಗಿದ್ದು, ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು ಹಾಗೂ ಆಡಳಿತದ ಸೂಚನೆಗಳನ್ನು ಪಾಲಿಸಬೇಕು ಎಂದು ಅಧಿಕಾರಿಗಳು ಮನವಿ ಮಾಡಿದ್ದಾರೆ.

## ಹೊತ್ತಿ ಉರಿದ ನಂದಿನಿ ಮಿಲ್ಕ್ ಪಾರ್ಲರ್: ಶಾಕ್‌ನಿಂದ ಮಾಲೀಕ ಹೃದಯಾಘಾತಕ್ಕೆ ಬಲಿ



**ಚಿಕ್ಕಬಳ್ಳಾಪುರ:** ನಗರದ ಪಶುವೈದ್ಯ ಇಲಾಖೆ ಕಚೇರಿ ಸಮೀಪ ಇರುವ ನಂದಿನಿ ಮಿಲ್ಕ್ ಪಾರ್ಲರ್‌ನಲ್ಲಿ ಸಂಭವಿಸಿದ ಅಗ್ನಿ ಅವಘಡದ ಆಘಾತದಿಂದ ಪಾರ್ಲರ್ ಮಾಲೀಕರೇ ಹೃದಯಾಘಾತಕ್ಕೆ ಒಳಗಾಗಿ ಮೃತಪಟ್ಟಿರುವ ಹೃದಯವಿದ್ರಾವಕ ಘಟನೆ ನಡೆದಿದೆ. ಈ ಘಟನೆ ಸ್ಥಳೀಯರಲ್ಲಿ ತೀವ್ರ ದುಃಖ ಮತ್ತು ಆತಂಕಕ್ಕೆ ಕಾರಣವಾಗಿದೆ.

ಮೃತರನ್ನು ಕಣಜೇನಹಳ್ಳಿ ಗ್ರಾಮದ ನಿವಾಸಿ ವೆಂಕಟೇಶ್ (55) ಎಂದು ಗುರುತಿಸಲಾಗಿದೆ. ಅವರು ಹಲವು ವರ್ಷಗಳಿಂದ ಚಿಕ್ಕಬಳ್ಳಾಪುರ ನಗರದಲ್ಲಿ ನಂದಿನಿ ಮಿಲ್ಕ್ ಪಾರ್ಲರ್ ನಡೆಸಿಕೊಂಡು ಕುಟುಂಬದ ಜೀವನ ನಿರ್ವಹಣೆ ಮಾಡುತ್ತಿದ್ದರು ಎಂದು ತಿಳಿದುಬಂದಿದೆ.

ಸೋಮವಾರ ರಾತ್ರಿ ಸುಮಾರು 11 ಗಂಟೆ ಸುಮಾರಿಗೆ ನಂದಿನಿ ಮಿಲ್ಕ್ ಪಾರ್ಲರ್‌ನಲ್ಲಿ ಬೆಂಕಿ ಕಾಣಿಸಿಕೊಂಡಿರುವ ಕುರಿತು ವೆಂಕಟೇಶ್ ಅವರಿಗೆ ಮಾಹಿತಿ ತಲುಪಿತ್ತು. ಮಾಹಿತಿ ತಿಳಿಯುತ್ತಿದ್ದಂತೆ ಅವರು ತಕ್ಷಣವೇ ಸ್ಥಳಕ್ಕೆ ಧಾವಿಸಿದ್ದು, ಸ್ಥಳೀಯರ ಸಹಾಯದಿಂದ ಬೆಂಕಿ ನಂದಿಸುವ ಕಾರ್ಯಾಚರಣೆಯಲ್ಲಿ ತೊಡಗಿಸಿಕೊಂಡಿದ್ದರು. ಕೆಲಕಾಲದ ಪ್ರಯತ್ನದ ಬಳಿಕ ಬೆಂಕಿಯನ್ನು ನಿಯಂತ್ರಣಕ್ಕೆ ತಂದು ಹೆಚ್ಚಿನ ಅನಾಹುತವನ್ನು ತಪ್ಪಿಸಲಾಗಿದೆ.

ಆದರೆ, ಈ ಅಗ್ನಿ ಅವಘಡದಿಂದ ತೀವ್ರ ಮಾನಸಿಕ ಆಘಾತಕ್ಕೊಳಗಾದ ವೆಂಕಟೇಶ್ ಅವರು ಬೆಂಕಿ ನಂದಿಸಿದ ಕೆಲವೇ ಕ್ಷಣಗಳಲ್ಲಿ ಅಂಗಡಿ ಮುಂಭಾಗದಲ್ಲೇ ಏಕಾಏಕಿ ಕುಸಿದು ಬಿದ್ದಿದ್ದಾರೆ. ಸ್ಥಳೀಯರು ತಕ್ಷಣ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲು ಪ್ರಯತ್ನಿಸಿದರೂ, ಹೃದಯಾಘಾತದಿಂದ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಘಟನೆಯ ಸುದ್ದಿ ತಿಳಿಯುತ್ತಿದ್ದಂತೆ ಕುಟುಂಬಸ್ಥರು ಮತ್ತು ಸ್ಥಳೀಯರು ಸ್ಥಳಕ್ಕೆ ಆಗಮಿಸಿದ್ದು, ವೆಂಕಟೇಶ್ ಅವರ ಅಕಾಲಿಕ ನಿಧನಕ್ಕೆ ಕಂಬನಿ ಮಿಡಿದಿದ್ದಾರೆ. ಹಲವು ವರ್ಷಗಳಿಂದ ಪ್ರಾಮಾಣಿಕವಾಗಿ ವ್ಯಾಪಾರ ನಡೆಸುತ್ತಿದ್ದ ವೆಂಕಟೇಶ್ ಅವರ ಹಠಾತ್ ಸಾವಿನಿಂದ ಕುಟುಂಬಸ್ಥರು ಮತ್ತು ಪರಿಚಿತರು ಶೋಕ ಸಾಗರದಲ್ಲಿ ಮುಳುಗಿದ್ದಾರೆ.

ಅಗ್ನಿ ಅವಘಡಕ್ಕೆ ನಿಖರ ಕಾರಣವೇನು ಎಂಬುದು ಇನ್ನೂ ತಿಳಿದುಬಂದಿಲ್ಲ. ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಅಥವಾ ಇತರ ಕಾರಣಗಳಿಂದ ಬೆಂಕಿ ಕಾಣಿಸಿಕೊಂಡಿರುವ ಸಾಧ್ಯತೆಯನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ತನಿಖೆ ಮುಂದುವರಿದಿದೆ.

ಒಂದೆಡೆ ಬೆಂಕಿಯಿಂದ ಉಂಟಾದ ಆರ್ಥಿಕ ನಷ್ಟ, ಮತ್ತೊಂದೆಡೆ ಅದರ ಆಘಾತದಿಂದ ಜೀವವನ್ನೇ ಕಳೆದುಕೊಂಡಿರುವ ಈ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯ ಜನರನ್ನು ತೀವ್ರ ದುಃಖಕ್ಕೆ ದೂಡಿದ್ದು, ಸ್ಥಳೀಯರಲ್ಲಿ ವಿಷಾದದ ವಾತಾವರಣ ನಿರ್ಮಾಣವಾಗಿದೆ.

## ಕಿರುತೆರೆಗೆ ಎಂಟ್ರಿ ಕೊಟ್ಟ ಮಾಜಿ ಸಚಿವ ಬಿ.ಸಿ ಪಾಟೀಲ್



ಜೀ ಕನ್ನಡ ವಾಹಿನಿಯಲ್ಲಿ ಪ್ರಸಾರವಾಗುತ್ತಿರುವ 'ಶ್ರೀ ರಾಘವೇಂದ್ರ ಮಹಾತ್ಮೆ' ಧಾರಾವಾಹಿಗೆ ಪ್ರೇಕ್ಷಕರಿಂದ ಅಭೂತಪೂರ್ವ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ರಾಯರ ಜೀವನದ ಪವಿತ್ರ ಪಯಣವನ್ನು ಭಕ್ತರು ಕಣ್ತುಂಬಿ ಕೊಳ್ಳುತ್ತಿದ್ದಾರೆ. ರಾಯರ ಮಹಿಮೆಯನ್ನು ತೆರೆ ಮೇಲೆ ಅಚ್ಚುಕಟ್ಟಾಗಿ ಮೂಡಿಸುತ್ತಿರುವ ಈ ಕಥಾಹಂದರಕ್ಕೆ ಮನೆಮನೆಯಿಂದಲೂ ಉತ್ತಮ ಮೆಚ್ಚುಗೆ ಸಿಕ್ಕಿದೆ. ಕಳೆದ ವಾರದ ಕಥೆಯಲ್ಲಿ ಪೂರ್ವಾಶ್ರಮದ ಹೆಂಡತಿ ಸರಸ್ವತಿಗೆ ಸದ್ಗತಿ ಕೊಟ್ಟ ಸಂಚಿಕೆ ಮನದುಂಬಿ ಬಂತು. ಪ್ರೇಕ್ಷಕರನ್ನು ಅಲುಗಾಡದಂತೆ ಸರೆ ಹಿಡಿಯಿತು. ರಾಯರ ಪಾತ್ರದಲ್ಲಿ ಪರಿಕ್ಷೀತ್ ರ ನಟನೆ ರಾಯರನ್ನೇ ನೋಡಿದಷ್ಟು ಪ್ರೇಕ್ಷಕರು ಮೆಚ್ಚುಗೆ ವ್ಯಕ್ತ ಪಡಿಸುತ್ತಿದ್ದಾರೆ.

ರಾಯರು ದೀಕ್ಷೆ ಪಡೆದ ನಂತರ ಮೂಲರಾಮನ ಆಜ್ಞೆಯಂತೆ ದಿವ್ಯ ಸಂಚಾರಕ್ಕೆ ಹೊರಟರು. ಭುವನಗಿರಿಯಲ್ಲಿ ಪಾದ ಪೂಜೆ ಮುಗಿಸಿಕೊಂಡು ಹೊರಟು ಕಟಗಿರಯ ಹತ್ತಿರ ವನ ಭೋಜನಕ್ಕೆ ಕುಳಿತಾಗ ಅಲ್ಲಿಗೆ ಕರಟಗಿರಿಯ ದೇಸಾಯಿ ಅವರು ಬಂದು ತಮ್ಮ ಮನೆಯ ಪೂಜೆಗೆ ರಾಯರನ್ನು ಅಹ್ವಾನಿಸುತ್ತಾರೆ ..ಅವರ ಒತ್ತಾಯಕ್ಕೆ ಮಣಿದು ಮನೆಗೆ ಬರುತ್ತಾರೆ ರಾಯರು. ರಾಯರ ಆಗಮನವನ್ನು ವಿಜೃಂಭಣೆಯಿಂದ ಆಚರಿಸಲು ದೇಸಾಯಿ ಅವರು ಭಕ್ಷಭೋಜನಗಳನ್ನು ತಯಾರಿಸಲು ಹೇಳುತ್ತಾರೆ. ಅದರಂತೆ ಮನೆಯಲ್ಲಿ ಸಕಲವು ಸಿದ್ಧತೆ ನಡೆಯುತ್ತದೆ. ಅಡುಗೆ ಮನೆಯಲ್ಲಿ ತಯರಾದ ಮಾವಿನಕಾಯಿ ಸಿಕರಣೆ ರುಚಿ ಸವಿಯಲು ಹೋಗಿ ದೇಸಾಯಿ ಅವರ ಮಗ ಅದರೊಳಗೆ ಬಿದ್ದು ಪ್ರಾಣ ಬಿಡುತ್ತಾನೆ.

ಪೂಜೆಯಲ್ಲಿ ನಿರತರಾಗಿದ್ದ ರಾಘವೇಂದ್ರ ತೀರ್ಥಂಕರಿಗೆ ಇದರ ಅರಿವಾಗುತ್ತದೆ. ಸತ್ತ ಮಗುವನ್ನ ಪೂಜಾ ಸ್ಥಳಕ್ಕೆ ತರಿಸಿ ತಮ್ಮ ಮಂತ್ರ ಪ್ರೋಕ್ಷಣೆಯಿಂದ ಮಗುವನ್ನು ಬದುಕಿಸುತ್ತಾರೆ. ಪವಾಡವು ಭಕ್ತರನ್ನು ವಿಸ್ಮಯ ಗೊಳಿಸಿದೆ. ಈ ವಾರಾಂತ್ಯ ಶನಿವಾರ ಮತ್ತು ಭಾನುವಾರ ಪ್ರಸಾರವಾಗಲಿದೆ. ಈ ಭಕ್ತಿಯ ಕಥೆಯಲ್ಲಿ ದೇಸಾಯಿ ಪಾತ್ರದಲ್ಲಿ ಹಿರಿಯ ನಟರಾದ ಃ.ಅ ಪಾಟೀಲ್ ಮಾಡುತ್ತಿದ್ದಾರೆ. ಮೊದಲ ಬಾರಿಗೆ ಕಿರುತೆರೆಯಲ್ಲಿ ಬಿ.ಸಿ ಪಾಟೀಲ್ ಅವರು ಕಾಣಿಸಿಕೊಳ್ಳುತ್ತಿದ್ದಾರೆ. ಅವರ ಪತ್ನಿಯಾಗಿ ಅರುಣಾ ಬಾಲರಾಜ್ ಕೂಡ ಇದ್ದಾರೆ. ಈ ಭಕ್ತಿ ಪ್ರಧಾನ ಧಾರಾವಾಹಿ ಜೀ ಕನ್ನಡ ವಾಹಿನಿಯಲ್ಲಿ ಶನಿವಾರ ಹಾಗೂ ಭಾನುವಾರ ಸಂಜೆ 6 ಗಂಟೆಗೆ ಪ್ರಸಾರವಾಗುತ್ತಿದೆ.